ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ	:	1417
ಸದಸ್ಯರ ಹೆಸರು	:	ಶ್ರೀ ಕೆ.ಸಿ. ಕೊಂಡಯ್ಯ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಉತ್ತರಿಸಬೇಕಾದ ದಿನಾಂಕ	:	23-03-2021
ಉತ್ತರಿಸುವವರು	:	ಪೌರಾಡಳಿತ ಮತ್ತು ಸಕ್ಕರೆ ಸಚಿವರು

ಕ್ರ.ಸ	ಪ್ರಶ್ನೆ	ಉತ್ತರ
ಅ)	ಪೌರಾಡಳಿತ ಇಲಾಖೆ ಯಲ್ಲಿ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು; ಕಳೆದ ಎಷ್ಟು ವರ್ಷ ಗಳಿಂದ ಈ ಹುದ್ದೆಗಳು ಖಾಲಿ ಇವೆ:	ಪೌರಾಡಳಿತ ಇಲಾಖೆಯಲ್ಲಿ ಪ್ರಸ್ತುತ 9972 ಹುದ್ದೆಗಳು ಖಾಲಿ ಇರುತ್ತದೆ. ಮೇಲ್ದರ್ಜೆಗೇರಿಸಿದ ನಗರ ಸ್ಥಳೀಯ ಸಂಸ್ಥೆಗಳಲ್ಲಿ ಸೃಜನೆಯಾದ ಹುದ್ದೆಗಳಿಂದ ಹಾಗೂ ಸ್ಥಳೀಯ ಸಂಸ್ಥೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಅಧಿಕಾರಿ/ನೌಕರರ ವರ್ಗಾವಣೆ, ಮುಂಬಡ್ತಿ, ನಿವೃತ್ತಿ ಹಾಗೂ ಇತರೆ ಕಾರಣಗಳಿಂದ ಕಾಲಕಾಲಕ್ಕೆ ಹುದ್ದೆಗಳು ಖಾಲಿಯಾಗಿರುತ್ತದೆ.
ಆ)	ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಕೈಗೊಂಡಿರುವ ಕ್ರಮ ಗಳೇನು?	ರಾಜ್ಯದ ನಗರ ಸ್ಥಳೀಯ ಸಂಸ್ಥೆಗಳಲ್ಲಿ ನೇರ ನೇಮಕಾತಿ ಅಡಿಯಲ್ಲಿ ಖಾಲಿ ಇರುವ ಗ್ರೂಪ್ ಬಿ ವೃಂದದ 4 ಹುದ್ದೆಗಳು ಮತ್ತು ಗ್ರೂಪ್ ಸಿ ವೃಂದದ 526 ಹುದ್ದೆಗಳನ್ನು ಒಳಗೊಂಡಂತೆ ಒಟ್ಟು 530 ಹುದ್ದೆಗಳನ್ನು ಭರ್ತಿ ಮಾಡಲು ಕರ್ನಾಟಕ ಲೋಕಸೇವಾ ಆಯೋಗದಲ್ಲಿ ನೇಮಕಾತಿ ಪ್ರಕ್ರಿಯೆಯಲ್ಲಿರುತ್ತದೆ. ಸದರಿ ಹುದ್ದೆಗಳ ಪೈಕಿ ಕರ್ನಾಟಕ ಲೋಕಸೇವಾ ಆಯೋಗದಿಂದ ಒಟ್ಟು 109 ಹುದ್ದೆಗಳಿಗೆ ಅಧಿಸೂಚನೆ ಹೊರಡಿಸಲಾಗಿರುತ್ತದೆ. ಸರ್ಕಾರದ ಆದೇಶ ಸಂಖ್ಯೆ: 126 ಟಿಎಂಎಸ್ 2016 ದಿನಾಂಕ: 04.12.2017ರಲ್ಲಿ ಪೌರಕಾರ್ಮಿಕರನ್ನು ಒಂದು ಬಾರಿಗೆ ವಿಶೇಷ ನೇಮಕಾತಿ ಮಾಡಿಕೊಳ್ಳಲು ಅವಕಾಶ ಕಲ್ಪಿಸಲಾಗಿರುತ್ತದೆ. ಅದರಂತೆ 2137 ಪೌರಕಾರ್ಮಿಕರನ್ನು ವಿಶೇಷ ನೇಮಕಾತಿ ಮೂಲಕ ಜಿಲ್ಲಾಧಿಕಾರಿಗಳ ಹಂತದಲ್ಲಿ ಭರ್ತಿ ಮಾಡಲಾಗಿರುತ್ತದೆ. **ಮುಂಬಡ್ತಿ ಕೋಟಾದಡಿ ಗ್ರೂಪ್-ಎ** ವೃಂದದ ಹುದ್ದೆಗಳಲ್ಲಿ ಖಾಲಿಯಾಗುವ ಹುದ್ದೆಗಳನ್ನು ಸರ್ಕಾರದ ಹಂತದಲ್ಲಿ ಹಾಗೂ **ಗ್ರೂಪ್-ಬಿ ಮತ್ತು 'ಸಿ' ವೃಂದದ** ಹುದ್ದೆಗಳಲ್ಲಿ ಖಾಲಿಯಾಗುವ ಹುದ್ದೆಗಳನ್ನು ಪೌರಾಡಳಿತ ನಿರ್ದೇಶನಾಲಯದ ಹಂತದಲ್ಲಿ ಕಾಲಕಾಲಕ್ಕೆ ಭರ್ತಿ ಮಾಡಲು ಕ್ರಮವಹಿಸಲಾಗುತ್ತಿದೆ. ಜಿಲ್ಲಾ ಮಟ್ಟದಲ್ಲಿ ಮುಂಬಡ್ತಿ ಕೋಟಾದಡಿಯಲ್ಲಿ ಭರ್ತಿ ಮಾಡಲಾಗುವ ವಿವಿಧ "ಸಿ" ವೃಂದದ ಖಾಲಿ ಹುದ್ದೆಗಳನ್ನು ನಿಯಮಾನುಸಾರ ಭರ್ತಿ ಮಾಡುವಂತೆ ಸಂಬಂಧಪಟ್ಟ ಜಿಲ್ಲಾಧಿಕಾರಿಗಳಿಗೆ ಸೂಚಿಸಲಾಗಿರುತ್ತದೆ.

ಸಂಖ್ಯೆ: ನಅಇ 41 ಜಿಇಎಲ್ 2021

(ಎನ್.ನಾಗರಾಜು, ಎಂ.ಟಿ.ಬಿ)
ಪೌರಾಡಳಿತ ಮತ್ತು ಸಕ್ಕರೆ ಸಚಿವರು